ಇ) ಪ್ರಸಕ್ತ ಸಾಲಿನಲ್ಲಿ ಇತರೆ ಲೆಕ್ಕ ಶೀರ್ಷಿಕೆಯಡಿಯಲ್ಲಿ ಈ ರಸ್ತೆಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ ಕ್ರಮ ಕೈಗೊಳ್ಳಲಾಗುವುದು.

466 (790) ಶ್ರೀ ಶಿವಶಂಕರ್ ರೆಡ್ಡಿ ಎನ್.ಹೆಚ್. (ಗೌರಿಬಿದನೂರು) :– ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗೌರಿಬಿದನೂರು ಪಟ್ಟಣದ ಹೊರವಲಯದಲ್ಲಿ ಸುಮಾರು ಅಂದಾಜು ರೂ.6.00 ಕೋಟಿ ರೂ.ಗಳ ಎರಡನೇ ಹಂತದ ಬೈಪಾಸ್ ಕಾಮಗಾರಿಯನ್ನು ಮಾಡಲು ಕಳೆದ 5–6 ವರ್ಷಗಳಿಂದ ಸರ್ಕಾರಕ್ಕೆ ನಿವೇದಿಸಿಕೊಂಡರೂ ಸಹ ಕಾಮಗಾರಿಯನ್ನು ಗಂಭೀರವಾಗಿ ಪರಿಗಣಿಸಿ ಪೂರ್ತಿಗೊಳ್ಳದೇ ಇರಲು ಕಾರಣವೇನು;

ಆ) ಈ ಬೈಪಾಸ್ ಕಾಮಗಾರಿಯನ್ನು ಕೂಡಲೇ ಕೈಗೆತ್ತಿಕೊಂಡು ಪೂರ್ಣಗೊಳಿಸಿ ಈ ಭಾಗದ ಜನತೆಗೆ ವಾಹನಗಳ ಸಂಚಾರಕ್ಕೆ ಅನುಕೂಲ ಮಾಡಿಕೊಡಲಾಗುವುದೇ?

ಶ್ರೀ ಹೆಚ್.ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು):

ಅ) ಗೌರಿಬಿದನೂರು ಪಟ್ಟಣದ ಹೊರವಲಯದಲ್ಲಿ ಬೈಪಾಸ್ ರಸ್ತೆ ನಿರ್ಮಿಸಲು ಹೆಚ್ಚಿನ ಅನುದಾನದ ಅವಶ್ಯಕತೆ ಇದ್ದುದರಿಂದ ಅನುದಾನದ ಕೊರತೆಯಿಂದಾಗಿ ಇದುವರೆವಿಗೂ ಕಾಮಗಾರಿಯನ್ನು ಕೈಗೊಳ್ಳಲಾಗಿರುವುದಿಲ್ಲ.

ಆ) 2007–08ನೇ ಸಾಲಿನ ಆಯವ್ಯಯದಲ್ಲಿ ಲೆಕ್ಕ ಶೀರ್ಷಿಕೆ 5054 ಯೋಜನೆ ಅಡಿಯಲ್ಲಿ ಅನುದಾನದ ಲಭ್ಯತೆಯನ್ನು ಆಧರಿಸಿ ಸದರಿ ರಸ್ತೆಯನ್ನು ಅಭಿವೃದ್ಧಿಪಡಿಸಲು ಕ್ರಮ ಕೈಗೊಳ್ಳಲಾಗುವುದು.

467 (791) ಶ್ರೀ ಶಿವಶಂಕರ್ ರೆಡ್ಡಿ ಎನ್.ಹೆಚ್. (ಗೌರಿಬಿದನೂರು) :– ಮಾನ್ಯ ಪೌರಾಡಳಿತ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗೌರಿಬಿದನೂರು ಪಟ್ಟಣದಲ್ಲಿ ಕಳೆದ 20 ವರ್ಷಗಳಿಂದ ಎಷ್ಟು ಹೊಸ ಬಡಾವಣೆಗಳು ಸೃಷ್ಟಿಯಾಗಿದೆ (ಅವುಗಳ ವಿವರ ಒದಗಿಸುವುದು);

ಆ) ಈ ಹೊಸ ಬಡಾವಣೆಯಲ್ಲಿ ಎಷ್ಟು ಎಷ್ಟು ಹೊಸ ನಿವೇಶನಗಳನ್ನು ನಿರ್ಮಿಸಲಾಗಿದೆ (ವಿವರ ನೀಡುವುದು);